Akashvani : Bangalore
National Bulletin In Kannada
24.11.2024 / 7.35 am
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
24.11.2024 / 7.35 am

<><*<><>*><>

<u>ಮುಖ್ಯಾಂಶಗಳು</u>

೧. ಆಕಾಶವಾಣಿಯ ಜನಪ್ರಿಯ ಕಾರ್ಯಕ್ರಮ 'ಮನ್ ಕಿ ಬಾತ್' ನ ೧೧೬ನೇ ಆವೃತ್ತಿಯಲ್ಲಿ ಇಂದು ಪ್ರಧಾನಿ ನರೇಂದ್ರ ಮೋದಿ ಅವರಿಂದ ಮನದಾಳದ ಮಾತು

೨. ವಿಧಾನಸಭಾ ಚುನಾವಣೆ ಫಲಿತಾಂಶ; ಮಹಾರಾಷ್ಟ್ರದಲ್ಲಿ ಬಿಜೆಪಿ ನೇತೃತ್ವದ ಮಹಾಯುತಿ ಮೈತ್ರಿಕೂಟಕ್ಕೆ ಐತಿಹಾಸಿಕ ಗೆಲುವು- ಜಾರ್ಖಂಡ್‌ನಲ್ಲಿ ಜೆಎಂಎಂ ನೇತೃತ್ವದ ಐಎನ್‌ಡಿಐಎ ಬಣಕ್ಕೆ ಜಯ

೩. ಸಂಸತ್ತಿನ ಚಳಿಗಾಲದ ಅಧಿವೇಶನ; ಇಂದು ಸರ್ವಪಕ್ಷ ಸಭೆ; ನಾಳೆಯಿಂದ ಕಲಾಪ ಆರಂಭ

೪. ಬಾರ್ಡರ್ ಗವಾಸ್ಕರ್ ಟ್ರೋಫಿ ; ಆಸ್ಟ್ರೇಲಿಯಾ ವಿರುದ್ಧ ಭಾರತಕ್ಕೆ ೨೧೮ ರನ್‌ಗಳ ಮುನ್ನಡೆ

<><*<><>*><>

ಇಂದು ಗುರುತೇಗ್ ಬಹದ್ದೂರ್ ಅವರ ಸಂಸ್ಮರಣೆಯ ಹುತಾತ್ಮ ದಿನ. ಈ ಹಿನ್ನೆಲೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಗುರುತೇಗ್ ಬಹದ್ದೂರ್ ಅವರಿಗೆ ಗೌರವ ನಮನ ಸಲ್ಲಿಸಿದ್ದಾರೆ. ಗುರುತೇಗ್ ಬಹದ್ದೂರ್ ಅವರು ಧರ್ಮ ರಕ್ಷಣೆ ಹಾಗೂ ಮಾನವೀಯತೆಗಾಗಿ ತ್ಯಾಗ ಬಲಿದಾನ ಮಾಡಿದ್ದಾರೆ. ಅವರ ಉಪದೇಶ ಮತ್ತು ಆದರ್ಶಗಳನ್ನು ಜನತೆ ಅಳವಡಿಸಿಕೊಳ್ಳಬೇಕು ಎಂದು ರಾಷ್ಟ್ರಪತಿಯವರು ಸಂದೇಶದಲ್ಲಿ ತಿಳಿಸಿದ್ದಾರೆ.

<><*<><>*><>

ಪ್ರಧಾನಿ ನರೇಂದ್ರ ಮೋದಿ ಅವರು, ಇಂದು ಬೆಳಗ್ಗೆ ಆಕಾಶವಾಣಿಯಲ್ಲಿ ಪ್ರತಿ ತಿಂಗಳು ಪ್ರಸಾರವಾಗುವ ತಮ್ಮ ಜನಪ್ರಿಯ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ದೇಶ ಮತ್ತು ವಿದೇಶಗಳಲ್ಲಿರುವ ಭಾರತೀಯರನ್ನುದ್ದೇಶಿಸಿ ಮಾತನಾಡಲಿದ್ದಾರೆ. ಬೆಳಗ್ಗೆ ೧೧ ಗಂಟೆಗೆ ಈ ಕಾರ್ಯಕ್ರಮ ಪ್ರಸಾರವಾಗಲಿದ್ದು, ಇದು ಮನ್ ಕಿ ಬಾತ್‌ನ ೧೧೬ನೇ ಅವತರಣಿಕೆಯಾಗಿದೆ. ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳಲ್ಲಿ, ಆಕಾಶವಾಣಿ ಸುದ್ದಿ ಜಾಲತಾಣ, ಮೊಬೈಲ್ ಆಪ್ ಹಾಗೂ ಯೂಟ್ಯೂಬ್ ಚಾನಲ್‌ಗಳಲ್ಲೂ ಈ ಕಾರ್ಯಕ್ರಮ ಮೂಡಿಬರಲಿದೆ. ಪ್ರಧಾನಮಂತ್ರಿ ಕಾರ್ಯಾಲಯ

ಹಾಗೂ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವಾಲಯದ ಜಾಲತಾಣಗಳಲ್ಲೂ ಈ ಕಾರ್ಯಕ್ರಮ ಬಿತ್ತರಗೊಳ್ಳಲಿದೆ. ಹಿಂದಿ ಭಾಷೆಯ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲೂ ಈ ಕಾರ್ಯಕ್ರಮ ಮೂಡಿಬರಲಿದೆ.

<><*<><>*><>

ಕರ್ನಾಟಕದ ಮೂರು ವಿಧಾನಸಭಾ ಕ್ಷೇತ್ರಗಳಿಗೆ ನಡೆದ ಚುನಾವಣೆಯಲ್ಲಿ ಆಡಳಿತಾರೂಢ ಕಾಂಗ್ರೆಸ್ ಜಯ ಗಳಿಸುವಲ್ಲಿ ಯಶಸ್ವಿಯಾದರೆ, ಬಿಜೆಪಿ ಮತ್ತು ಜೆಡಿಎಸ್ ಮೈತ್ರಿಕೂಟ ವಿಧಾನಸಭೆಯಲ್ಲಿ ತಲಾ ಒಂದೊಂದು ಸ್ಥಾನಗಳನ್ನು ಕಳೆದುಕೊಂಡಿವೆ. ತೀವ್ರ ಜಿದ್ದಾಜಿದ್ದಿನ ಕಣವಾಗಿದ್ದ ಮೂರು ವಿಧಾನಸಭಾ ಕ್ಷೇತ್ರಗಳ ಉಪಸಮರದಲ್ಲಿ ಆಡಳಿತಾರೂಢ ಕಾಂಗ್ರೆಸ್ ಪಕ್ಷ ಮಹತ್ವದ ಗೆಲುವು ಸಾಧಿಸಿದೆ. ತೀವ್ರ ಗಮನ ಸೆಳೆದಿದ್ದ ಚನ್ನಪಟ್ಟಣದಲ್ಲಿ ಚುನಾವಣೆಗೂ ಮುನ್ನ ಕಾಂಗ್ರೆಸ್‌ಗೆ ಪಕ್ಷಾಂತರ ಮಾಡಿದ್ದ ಸಿ.ಪಿ.ಯೋಗೇಶ್ವರ್ ಜಯಗಳಿಸುವುದರೊಂದಿಗೆ ಸತತವಾಗಿ ಮೂರು ಬಾರಿ ಸೋಲುವುದರಿಂದ ಪಾರಾಗಿದ್ದಾರೆ. ಮತ್ತೊಂದೆಡೆ ಸಂಡೂರು ಮತ್ತು ಶಿಗ್ಗಾವಿಯಲ್ಲಿಯೂ ಕಾಂಗ್ರೆಸ್ ಅಭ್ಯರ್ಥಿಗಳಾದ ಇ. ಅನ್ನಪೂರ್ಣ ಮತ್ತು ಯಾಸೀನ್ ಪಠಾಣ ಗೆಲುವು ಸಾಧಿಸಿದ್ದಾರೆ. ಮೂರು ಕ್ಷೇತ್ರಗಳಿಗೆ ನಡೆದ ವಿಧಾನಸಭಾ ಚುನಾವಣಾ ಕಣದಲ್ಲಿದ್ದ ಇಬ್ಬರು ಮುಖ್ಯಮಂತ್ರಿಗಳ ಮಕ್ಕಳು ಸೋಲಿನ ಕಹಿ ಅನುಭವಿಸಿದ್ದಾರೆ. ಮೂರು ಕ್ಷೇತ್ರಗಳು ಕಾಂಗ್ರೆಸ್ ಪಾಲಾಗುವ ಮೂಲಕ ಉಪಚುನಾವಣಾ ಫಲಿತಾಂಶ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿಕೂಟಕ್ಕೆ ತೀವ್ರ ಹಿನ್ನಡೆಯನ್ನು ಉಂಟು ಮಾಡಿದೆ. ಇದೇ ವೇಳೆ ರಾಜ್ಯ ವಿಧಾನಸಭೆಯ ಮೂರು ಕ್ಷೇತ್ರಗಳಲ್ಲಿನ ಗೆಲುವು ಕಾಂಗ್ರೆಸ್ ತನ್ನ ಸದಸ್ಯ ಬಲ ಹೆಚ್ಚಿಸಿಕೊಂಡು ಮತ್ತಷ್ಟು ಗಟ್ಟಿಯಾಗಲು ಅನುಕೂಲವಾಗಿದೆ.

<><*<><>*><>

ಮಹಾರಾಷ್ಟ್ರ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಗೆಲುವು ಉತ್ತಮ ಆಡಳಿತ ಮತ್ತು ಅಭಿವೃದ್ಧಿಗೆ ಸಂದ ಜಯ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ದೆಹಲಿಯ ಬಿಜೆಪಿ ಪ್ರಧಾನ ಕಚೇರಿಯಲ್ಲಿ ಪಕ್ಷದ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿದ ಮೋದಿ, ಚುನಾವಣಾ ಫಲಿತಾಂಶವು ನಕಾರಾತ್ಮಕ ರಾಜಕೀಯದ ಸೋಲು ಎಂದು ಹೇಳಿದರು. ಹಲವಾರು ರಾಜ್ಯಗಳಲ್ಲಿ ನಡೆದ ಉಪಚುನಾವಣೆಯಲ್ಲಿ ಜನರು ಬಿಜೆಪಿಯ ಮೇಲೆ ವಿಶ್ವಾಸವನ್ನು ತೋರಿಸಿದ್ದಾರೆ. ಜನರು ಅಭಿವೃದ್ಧಿಯನ್ನು ಮಾತ್ರ ಬಯಸುತ್ತಾರೆ ಎಂಬುದನ್ನು ಇದು ಸೂಚಿಸುತ್ತದೆ ಎಂದು ಪ್ರಧಾನಿ ಹೇಳಿದರು. ಪಕ್ಷದ ಮೇಲೆ ನಂಬಿಕೆ ಇಟ್ಟಿದ್ದಕ್ಕಾಗಿ ಮಹಿಳೆಯರು, ರೈತರು ಮತ್ತು ಯುವಕರಿಗೆ ಕೃತಜ್ಞತೆ ಸಲ್ಲಿಸಿದರು. ಮಹಾರಾಷ್ಟ್ರದಲ್ಲಿ ಬಿಜೆಪಿ ಅತಿ ದೊಡ್ಡ ಪಕ್ಷವಾಗಿ ಹೊರಹೊಮ್ಮಿರುವುದು ಇದು ಸತತ ಮೂರನೇ ಬಾರಿಯಾಗಿದ್ದು, ಇದು ನಿಸ್ಸಂದೇಹವಾಗಿ ಐತಿಹಾಸಿಕ ಸಾಧನೆಯಾಗಿದೆ. ಈ ಗೆಲುವು ಬಿಜೆಪಿಯ ಆಡಳಿತ ಮಾದರಿಯ ಮುದ್ರೆಯಾಗಿದೆ ಎಂದರು. ಉತ್ತಮ ಆಡಳಿತದ ವಿಷಯದಲ್ಲಿ ದೇಶ ಬಿಜೆಪಿ ಮತ್ತು ಎನ್‌ಡಿಎಯನ್ನು ಮಾತ್ರ ನಂಬುತ್ತದೆ. ವಿಕಸಿತ ಭಾರತ್‌ನ ಸಂಕಲ್ಪವನ್ನು

ಮಹಾರಾಷ್ಟ್ರ ಬಲಪಡಿಸಿದೆ ಎಂದರು. ಬಿಜೆಪಿಗೆ ಇರುವ ಅಗಾಧ ಬೆಂಬಲವು ಆಧುನಿಕ ಭಾರತವು ಪ್ರಗತಿ ಮತ್ತು ವಿಶ್ವಾಸಾರ್ಹ ಆಡಳಿತವನ್ನು ಬಯಸುತ್ತದೆ ಎಂಬ ಸ್ಪಷ್ಟ ಸಂದೇಶವನ್ನು ಫಲಿತಾಂಶ ರವಾನಿಸಿದೆ. ನಗರಗಳು ಅಭಿವೃದ್ಧಿಯತ್ತ ಒಲವು ತೋರಿವೆ, ಆಧುನಿಕ ಮೂಲಸೌಕರ್ಯವನ್ನು ಅಳವಡಿಸಿಕೊಂಡಿವೆ, ಇದರಿಂದಾಗಿ ಬೆಳವಣಿಗೆಗೆ ಅಡ್ಡಿಯಾಗುವ ರಾಜಕೀಯವನ್ನು ತಿರಸ್ಕರಿಸಲಾಗಿದೆ ಎಂದು ಮೋದಿ ಹೇಳಿದರು. ಜಾಗತಿಕ ಗುಣಮಟ್ಟವನ್ನು ಪೂರೈಸಲು ಭಾರತದ ದಾಪುಗಾಲುಗಳನ್ನು ಚಾಲನೆ ಮಾಡುವ ಮೂಲಕ ವಿಶ್ವ ದರ್ಜೆಯ ಮೂಲಸೌಕರ್ಯಗಳನ್ನು ತಲುಪಿಸಲು ಬಿಜೆಪಿ ಬದ್ಧವಾಗಿದೆ ಎಂದು ಅವರು ಹೇಳಿದರು. ಇಡೀ ದೇಶಕ್ಕೆ ಒಂದೇ ಸಂವಿಧಾನ ಅನ್ವಯವಾಗಲಿದೆ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಸಂವಿಧಾನವೇ ಭಾರತದ ಸಂವಿಧಾನವಾಗಿದೆ ಎಂದು ಪ್ರಧಾನಿ ಮೋದಿ ತಮ್ಮ ಭಾಷಣದಲ್ಲಿ ಹೇಳಿದರು. ಈಗ ವಿಶ್ವದ ಯಾವುದೇ ಶಕ್ತಿಯು ೩೭೦ ನೇ ವಿಧಿಯನ್ನು ಮರಳಿ ತರಲು ಸಾಧ್ಯವಿಲ್ಲ ಎಂದು ಅವರು ಕಾಂಗ್ರೆಸ್ ಮತ್ತು ಅವರ ಮಿತ್ರಪಕ್ಷಗಳಿಗೆ ಹೇಳಿದರು.

<><*<><>*><>

ಮಹಾರಾಷ್ಟ್ರ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಗೆಲುವು ಉತ್ತಮ ಆಡಳಿತ ಮತ್ತು ಅಭಿವೃದ್ಧಿಗೆ ಸಂದ ಜಯ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ದೆಹಲಿಯ ಬಿಜೆಪಿ ಪ್ರಧಾನ ಕಚೇರಿಯಲ್ಲಿ ಪಕ್ಷದ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿದ ಮೋದಿ, ಚುನಾವಣಾ ಫಲಿತಾಂಶವು ನಕಾರಾತ್ಮಕ ರಾಜಕೀಯದ ಸೋಲು ಎಂದು ಹೇಳಿದರು. ಹಲವಾರು ರಾಜ್ಯಗಳಲ್ಲಿ ನಡೆದ ಉಪಚುನಾವಣೆಯಲ್ಲಿ ಜನರು ಬಿಜೆಪಿಯ ಮೇಲೆ ವಿಶ್ವಾಸವನ್ನು ತೋರಿಸಿದ್ದಾರೆ. ಜನರು ಅಭಿವೃದ್ಧಿಯನ್ನು ಮಾತ್ರ ಬಯಸುತ್ತಾರೆ ಎಂಬುದನ್ನು ಇದು ಸೂಚಿಸುತ್ತದೆ ಎಂದು ಪ್ರಧಾನಿ ಹೇಳಿದರು. ಪಕ್ಷದ ಮೇಲೆ ನಂಬಿಕೆ ಇಟ್ಟಿದ್ದಕ್ಕಾಗಿ ಮಹಿಳೆಯರು, ರೈತರು ಮತ್ತು ಯುವಕರಿಗೆ ಕೃತಜ್ಞತೆ ಸಲ್ಲಿಸಿದರು. ಮಹಾರಾಷ್ಟ್ರದಲ್ಲಿ ಬಿಜೆಪಿ ಅತಿ ದೊಡ್ಡ ಪಕ್ಷವಾಗಿ ಹೊರಹೊಮ್ಮಿರುವುದು ಇದು ಸತತ ಮೂರನೇ ಬಾರಿಯಾಗಿದ್ದು, ಇದು ನಿಸ್ಸಂದೇಹವಾಗಿ ಐತಿಹಾಸಿಕ ಸಾಧನೆಯಾಗಿದೆ. ಈ ಗೆಲುವು ಬಿಜೆಪಿಯ ಆಡಳಿತ ಮಾದರಿಯ ಮುದ್ರೆಯಾಗಿದೆ ಎಂದರು. ಉತ್ತಮ ಆಡಳಿತದ ವಿಷಯದಲ್ಲಿ ದೇಶ ಬಿಜೆಪಿ ಮತ್ತು ಎನ್‌ಡಿಎಯನ್ನು ಮಾತ್ರ ನಂಬುತ್ತದೆ. ವಿಕಸಿತ ಭಾರತ್‌ನ ಸಂಕಲ್ಪವನ್ನು ಮಹಾರಾಷ್ಟ್ರ ಬಲಪಡಿಸಿದೆ ಎಂದರು. ಬಿಜೆಪಿಗೆ ಇರುವ ಅಗಾಧ ಬೆಂಬಲವು ಆಧುನಿಕ ಭಾರತವು ಪ್ರಗತಿ ಮತ್ತು ವಿಶ್ವಾಸಾರ್ಹ ಆಡಳಿತವನ್ನು ಬಯಸುತ್ತದೆ ಎಂಬ ಸ್ಪಷ್ಟ ಸಂದೇಶವನ್ನು ಫಲಿತಾಂಶ ರವಾನಿಸಿದೆ. ನಗರಗಳು ಅಭಿವೃದ್ಧಿಯತ್ತ ಒಲವು ತೋರಿವೆ, ಆಧುನಿಕ ಮೂಲಸೌಕರ್ಯವನ್ನು ಅಳವಡಿಸಿಕೊಂಡಿವೆ, ಇದರಿಂದಾಗಿ ಬೆಳವಣಿಗೆಗೆ ಅಡ್ಡಿಯಾಗುವ ರಾಜಕೀಯವನ್ನು ತಿರಸ್ಕರಿಸಲಾಗಿದೆ ಎಂದು ಮೋದಿ ಹೇಳಿದರು. ಜಾಗತಿಕ ಗುಣಮಟ್ಟವನ್ನು ಪೂರೈಸಲು ಭಾರತದ ದಾಪುಗಾಲುಗಳನ್ನು ಚಾಲನೆ ಮಾಡುವ ಮೂಲಕ ವಿಶ್ವ ದರ್ಜೆಯ ಮೂಲಸೌಕರ್ಯಗಳನ್ನು ತಲುಪಿಸಲು ಬಿಜೆಪಿ ಬದ್ಧವಾಗಿದೆ ಎಂದು ಅವರು ಹೇಳಿದರು. ಇಡೀ ದೇಶಕ್ಕೆ ಒಂದೇ ಸಂವಿಧಾನ

ಅನ್ವಯವಾಗಲಿದೆ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಸಂವಿಧಾನವೇ ಭಾರತದ ಸಂವಿಧಾನವಾಗಿದೆ ಎಂದು ಪ್ರಧಾನಿ ಮೋದಿ ತಮ್ಮ ಭಾಷಣದಲ್ಲಿ ಹೇಳಿದರು. ಈಗ ವಿಶ್ವದ ಯಾವುದೇ ಶಕ್ತಿಯು ೩೭೦ ನೇ ವಿಧಿಯನ್ನು ಮರಳಿ ತರಲು ಸಾಧ್ಯವಿಲ್ಲ ಎಂದು ಅವರು ಕಾಂಗ್ರೆಸ್ ಮತ್ತು ಅವರ ಮಿತ್ರಪಕ್ಷಗಳಿಗೆ ಹೇಳಿದರು.

<><*<><>*><>

ಸಂಸತ್ತಿನ ಚಳಿಗಾಲದ ಅಧಿವೇಶನದ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ಇಂದು ಸರ್ವಪಕ್ಷಗಳ ಕರೆದಿದೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಈ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ಅಧಿವೇಶನದ ಸಂದರ್ಭದಲ್ಲಿ ಲೋಕಸಭೆ ಹಾಗೂ ರಾಜ್ಯ ಸಭೆಯ ಸುಗಮ ಕಲಾಪಗಳಿಗಾಗಿ ಸರ್ಕಾರ ವಿವಿಧ ರಾಜಕೀಯ ಪಕ್ಷಗಳಿಂದ ಬೆಂಬಲ ಕೋರಲಿದೆ. ಸಂಸತ್ತಿನ ಚಳಿಗಾಲದ ಅಧಿವೇಶನ ನಾಳೆ ಆರಂಭವಾಗಲಿದ್ದು, ಡಿಸೆಂಬರ್ ೨೦ ರವರೆಗೆ ನಡೆಯಲಿದೆ. ಸಂವಿಧಾನ ದಿನದ ಅಂಗವಾಗಿ ಇದೇ ೨೬ ರಂದು ಸದನದ ಕಲಾಪ ಇರುವುದಿಲ್ಲ.

<><*<><>*><>

ಜಾರ್ಖಂಡ್‌ನಲ್ಲಿ, ಐಎನ್‌ಡಿಐಎ ಮೈತ್ರಿಕೂಟದ ಹೊಸದಾಗಿ ಆಯ್ಕೆಯಾದ ಶಾಸಕರು ತಮ್ಮ ನಾಯಕನನ್ನು ಆಯ್ಕೆ ಮಾಡಲು ಇಂದು ರಾಂಚಿಯಲ್ಲಿ ಸಭೆ ನಡೆಸಲಿದ್ದಾರೆ. ಮುಖ್ಯಮಂತ್ರಿ ಹೇಮಂತ್ ಸೊರೇನ್ ಅವರ ಅಧಿಕೃತ ನಿವಾಸದಲ್ಲಿ ಸಭೆ ಕರೆಯಲಾಗಿದೆ. ಜೆಎಂಎಂ, ಕಾಂಗ್ರೆಸ್, ಆರ್‌ಜೆಡಿ ಮತ್ತು ಸಿಪಿಐ (ಎಂಎಲ್)ನ ನೂತನ ಚುನಾಯಿತ ಶಾಸಕರು ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಮೂಲಗಳ ಪ್ರಕಾರ, ಹೇಮಂತ್ ಸೊರೇನ್ ಅವರು ಮೈತ್ರಿಕೂಟ ಶಾಸಕಾಂಗ ಪಕ್ಷದ ನಾಯಕರಾಗಿ ಆಯ್ಕೆಯಾಗುವ ಸಾಧ್ಯತೆಯಿದೆ. ನಾಯಕನಾಗಿ ಆಯ್ಕೆಯಾದ ನಂತರ, ಹೇಮಂತ್ ಸೊರೇನ್ ರಾಜ್ಯದಲ್ಲಿ ಹೊಸ ಸರ್ಕಾರ ರಚಿಸಲು ಹಕ್ಕು ಸಾಧಿಸಲಿದ್ದಾರೆ.

<><*<><>*><>

ನಾಳೆ ಸಂವಿಧಾನ ದಿನಾಚರಣೆಯ ಸ್ಮರಣಾರ್ಥ ನವದೆಹಲಿಯಲ್ಲಿ ನಡೆಯಲಿರುವ ಪಾದಯಾತ್ರೆ ನೇತೃತ್ವವನ್ನು ಕೇಂದ್ರ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವ ಡಾ.ಮನ್ಸೂಖ್ ಮಾಂಡವೀಯ ವಹಿಸಲಿದ್ದಾರೆ. ಈ ಪಾದಯಾತ್ರೆಯು, 'ಮೇರಾ ಸಂವಿಧಾನ್' ಮೇರಾ ಸ್ವಾಭಿಮಾನ್' ಘೋಷವಾಕ್ಯದಡಿ ಭಾರತೀಯ ಸಂವಿಧಾನದ ಅಂಗೀಕಾರ ದಿನವನ್ನು ಆಚರಿಸುತ್ತದೆ. ಪಾದಯಾತ್ರೆಯು, ಸಾಂವಿಧಾನಿಕ ಮೌಲ್ಯಗಳನ್ನು ಉತ್ತೇಜಿಸಲು ಮತ್ತು ಯುವಕರಲ್ಲಿ ಪ್ರಜಾಪ್ರಭುತ್ವದ ಪೀಠಿಕೆ ಮತ್ತು ತತ್ವಗಳ ಬಗ್ಗೆ ಜಾಗೃತಿ ಮೂಡಿಸುವ ಗುರಿಯನ್ನು ಹೊಂದಿದೆ. ಈ ಪಾದಯಾತ್ರೆಯಲ್ಲಿ ಕೇಂದ್ರ ಸಚಿವರು, ಸಂಸದರು ಮತ್ತು ಇತರ ಗಣ್ಯರು ಭಾಗವಹಿಸುವ ನಿರೀಕ್ಷೆಯಿದೆ.

<><*<><>*><>

ಗೋವಾದಲ್ಲಿ ನಡೆದಿರುವ ೫೫ನೇ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿ 'ನಾಳೆಯ ಕ್ರಿಯಾತ್ಮಕ ಮನಸ್ಸುಗಳು' ಸ್ಪರ್ಧೆಗೆ ಭಾರೀ ಉತ್ಸಾಹ ಕಂಡು ಬಂದಿದೆ. ೪೮ ತಾಸುಗಳ ಅವಧಿಯಲ್ಲಿ ಕಿರುಚಿತ್ರ ಒಂದನ್ನು ನಿರ್ಮಿಸುವುದು ಸ್ಪರ್ಧೆಯ ಪ್ರಮುಖ ಅಂಶವಾಗಿದ್ದು, ಇದರಲ್ಲಿ ೧೦೦ ಸ್ಪರ್ಧಿಗಳನ್ನು ಒಳಗೊಂಡ ೫ ತಂಡಗಳು ಭಾಗವಹಿಸಿದ್ದವು.

<><*<><>*><>

ಆಸ್ಟ್ರೇಲಿಯಾದ ಪರ್ತ್‌ದಲ್ಲಿ ನಡೆದಿರುವ ಬಾರ್ಡರ್ ಗವಾಸ್ಕರ್ ಟ್ರೋಫಿ ಮೊದಲ ಟೆಸ್ಟ್ ಪಂದ್ಯದಲ್ಲಿ ಎರಡನೇ ದಿನವಾದ ನಿನ್ನೆ ಭಾರತ, ತನ್ನ ಎರಡನೇ ಇನ್ನಿಂಗ್ಸ್‌ನಲ್ಲಿ ಯಾವುದೇ ವಿಕೆಟ್ ನಷ್ಟವಿಲ್ಲದೆ ೧೭೨ ರನ್ ಗಳಿಸಿದ್ದು, ಇಂದು ಆಟ ಮುಂದುವರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ಬೆಳಗ್ಗೆ ೭:೫೦ ಕ್ಕೆ ಪ್ರಾರಂಭವಾಗಲಿದೆ. ಪ್ರವಾಸಿ ಭಾರತಿ ತಂಡ, ಒಟ್ಟು ೨೧೮ ರನ್‌ಗಳ ಮುನ್ನಡೆ ಪಡೆದಂತಾಗಿದೆ. ದಿನದಾಟದ ಮುಕ್ತಾಯಕ್ಕೆ ಯಶಸ್ವಿ ಜೈಸ್ವಾಲ್ ೯೦ ಹಾಗೂ ಕೆ.ಎಲ್.ರಾಹುಲ್ ೬೨ ರನ್ ಮಾಡಿ ಆಟವಾಡುತ್ತಿದ್ದರು. ಇದಕ್ಕೂ ಮುನ್ನ ಶುಕ್ರವಾರ ೭ ವಿಕೆಟ್ ನಷ್ಟಕ್ಕೆ ೬೭ ರನ್‌ಗಳ ಸ್ಕೋರ್‌ನಿಂದ ಆಟ ಮುಂದುವರಿಸಿದ ಆಸ್ಟ್ರೇಲಿಯಾ ತನ್ನ ಮೊದಲ ಇನ್ನಿಂಗ್ಸ್‌ನಲ್ಲಿ ೧೦೪ ರನ್ ಗಳಿಸುವಷ್ಟರಲ್ಲಿ ತನ್ನ ಉಳಿದ ೩ ವಿಕೆಟ್‌ಗಳನ್ನು ಕಳೆದುಕೊಂಡಿತು. ಭಾರತ ಪರ ನಾಯಕ ಜಸ್‌ಪ್ರೀತ್ ಬೂಮ್ರಾ ೫ ವಿಕೆಟ್, ಹರ್ಷಿತ್ ರಾಣ ೩, ಮೊಹಮ್ಮದ್ ಸಿರಾಜ್ ೨ ವಿಕೆಟ್ ಪಡೆದರು.

<><*<><>*><>

ಸೌದಿ ಅರೇಬಿಯಾದ ಜೆಡ್ಡಾದಲ್ಲಿ ಇಂದು ಮತ್ತು ನಾಳೆ ಮುಂದಿನ ವರ್ಷದ ಇಂಡಿಯನ್ ಪ್ರೀಮಿಯರ್ ಲೀಗ್ -ಐಪಿಎಲ್ ೨೦೨೫ರ ಹರಾಜು ನಡೆಯಲಿದೆ. ಈ ಹಿಂದೆ ೨೦೨೪ರ ಐಪಿಎಲ್ ಹರಾಜುಗಳನ್ನು ಸಹ ದುಬೈ ಆಯೋಜಿಸಿದ್ದು, ಸತತ ಎರಡನೇ ವರ್ಷ ವಿದೇಶದಲ್ಲಿ ಈ ಹರಾಜು ಪ್ರಕ್ರಿಯೆ ನಡೆಸಲಾಗುತ್ತಿದೆ. ಈ ಬಾರಿಯ ಹರಾಜಿನಲ್ಲಿ ೧ ಸಾವಿರದ ೧೬೫ ಭಾರತೀಯ ಮತ್ತು ೪೦೯ ವಿದೇಶಿ ಆಟಗಾರರೊಂದಿಗೆ ಒಟ್ಟು ೧ ಸಾವಿರದ ಐನೂರ ಎಪ್ಪತ್ತನಾಲ್ಕು ಕ್ರಿಕೆಟಿಗರು ಭಾಗವಹಿಸಿದ್ದಾರೆ. ಪ್ರತಿ ಫ್ರಾಂಚೈಸಿಯು ಗರಿಷ್ಠ ೨೫ ಆಟಗಾರರ ತಂಡವನ್ನು ರೂಪಿಸಲು ಸಾಧ್ಯವಾಗುತ್ತದೆ. ಜತೆಗೆ ಹರಾಜಿನಿಂದ ಒಟ್ಟು ೨೦೪ ಸ್ಲಾಟ್‌ಗಳನ್ನು ಪಡೆದುಕೊಳ್ಳಲಾಗುವುದು. ಲಭ್ಯವಿರುವ ೨೦೪ ಸ್ಲಾಟ್‌ಗಳಿಗೆ ೧೦ ಫ್ರಾಂಚೈಸಿಗಳು ಒಟ್ಟಾರೆಯಾಗಿ ಸುಮಾರು ೬೪೧.೫ ಕೋಟಿ ರೂಪಾಯಿಗಳನ್ನು ಖರ್ಚು ಮಾಡಲಿವೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ <>*><>